**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 569/2024**

**ಚಾ.ಸಾಃ 14, ಫ್ರಾ.ಸಾಃ 5**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ಸಂಗೀತಾ |
| ಗಂಡನ ಹೆಸರು | ಕಾರ್ತಿಕ್ ಕಂಬಳಿ |
| ವಯಸ್ಸು | 31 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಹೊನ್ನಾವರ ಪೋಲೀಸ್ ಠಾಣೆ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 09-01-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಜನೇವರಿ-2024 ರಿಂದ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕೆಲಸ ಮಾಡುತ್ತಿದ್ದೇನೆ.

ದಿನಾಂಕ 12-08-2024 ರಂದು ಮಧ್ಯಾಹ್ನ 03-00 ಗಂಟೆಗೆ ಚಾಸಾ-1 ರವರು ಅಬಕಾರಿ ದಾಳಿಯ ನಂತರ ಠಾಣೆಗೆ ಹಾಜರಾಗಿ ಒಂದು ದೂರು, ಪಂಚನಾಮೆ ಮತ್ತು ಪಂಚನಾಮಯಡಿಯಲ್ಲಿ ಹಾಜರುಪಡಿಸಿಕೊಂಡ ಮುದ್ದೆಮಾಲುಗಳು ಮತ್ತು ಆರೋಪಿಯನ್ನು ಹಾಜರುಪಡಿಸಿದ್ದು ಸದರಿ ದೂರಿನ ಆಧಾರದಲ್ಲಿ ಠಾಣಾ ಮೊಕದ್ದಮೆ ಸಂಖ್ಯೆಃ181/2024 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿರುತ್ತೇನೆ. ದೂರನ್ನು ನೋಡುತ್ತಿದ್ದು ನಿಪಿ-4 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ನಿಪಿ-6 ಎಂದು, ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಅದೇ ದಿನ ಕಲಂ 63(4)ರ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ-7 ಎಂದು, ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಸದರಿ ಫೋಟೋದ ಸಿಡಿಯನ್ನು ನೋಡುತ್ತಿದ್ದು ನಿಪಿ-8 ಎಂದು ಗುರುತಿಸಲಾಯಿತು.

ಹಾಜರುಪಡಿಸಿಕೊಂಡ ಮುದ್ದೆಮಾಲುಗಳನ್ನು ಠಾಣಾ ಪಿಎಫ್.ನಲ್ಲಿ ನಮೂದಿಸಿರುತ್ತೇನೆ. ಅಕ್ರಮ ಮದ್ಯ ಅಮಾನತ್ತುಪಡಿಸಿಕೊಂಡ ಬಗ್ಗೆ ಅಬಕಾರಿ ಉಪಆಯುಕ್ತರಿಗೆ ಮಾಹಿತಿ ನೀಡಿರುತ್ತೇನೆ. ಹಾಜರುಪಡಿಸಿದ ಆರೋಪಿಯನ್ನು ಬಂಧಿಸಿ ದಸ್ತಗಿರಿ ಕ್ರಮ ಅನುಸರಿಸಿ ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ದಾಳಿಯ ಕಾಲಕ್ಕೆ ಸಹಕರಿಸಿದ ಚಾಸಾ-4 ರಿಂದ 10 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 20-08-2024 ರಂದು ಅಮಾನತ್ತುಪಡಿಸಿಕೊಂಡಿದ್ದ ಮದ್ಯವನ್ನು ಚಾಸಾ-11 ರವರ ಮೂಲಕ ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತ್ತೇನೆ.

ದಿನಾಂಕ 22-08-2024 ರಂದು ಎಫ್.ಎಸ್.ಎಲ್. ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ವರದಿಯನ್ನು ನೋಡುತ್ತಿದ್ದು ನಿಪಿ-9 ಎಂದು, ಸಾಕ್ಷಿ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ದಿನಾಂಕ 26-08-2024 ರಂದು ಘಟನಾ ಸ್ಥಳದ ಮಾಲಿಕತ್ವಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪೂರೈಸುವಂತೆ ಚಂದಾವರ ಗ್ರಾಮಪಂಚಾಯತಿ ಪಿಡಿಓರವರಿಗೆ ಪತ್ರ ಬರೆದಿರುತ್ತೇನೆ. ಪತ್ರವನ್ನು ನೋಡುತ್ತಿದ್ದು ನಿಪಿ-10 ಎಂದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ದಿನಾಂಕ 28-08-2024 ರಂದು ಪಿಡಿಓರವರಿಂದ ಪ್ರಕರಣಕ್ಕೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನುನೋಡುತ್ತಿದ್ದು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

ತನಿಖೆ ಪೂರೈಸಿ ಆರೋಪಿ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ನನ್ನ ಮುಂದೆ ಹಾಜರುಪಡಿಸಿದ ಮುದ್ದೆ ಮಾಲುಗಳನ್ನು ನೋಡಿದರೆ ಗುರುತಿಸುತ್ತೇನೆ. ನ್ಯಾಯಾಲಯದ ಮುಂದಿರುವ ಮುಮಾ-1 ರಿಂದ 7 ನ್ನು ನೋಡಿ ಗುರುತಿಸಿರುತ್ತಾರೆ.

ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಗೈರುಹಾಜರಿ. ಗುರುತಿನ ಬಗ್ಗೆ ತಕರಾರು ಇಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಜ್. ಜಿ. ಚಂದಾವರರಿಂದಃ**

ಚಾಸಾ-1 ಸಹೋದ್ಯೋಗಿಯಾಗಿರುವುದರಿಂದ ಅವರು ನೀಡಿದ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ದೂರು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರು ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಅಂಕೆ ಸಂಖ್ಯೆಗಳಿಗೋಸ್ಕರ ದಾಖಲಿಸಿರುವ ಪ್ರಕರಣಗಳಿಗೆ ಅನುಕೂಲವಾಗುವಂತೆ ದಾಖಲೆಗಳನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ಪಿಡಿಓ ರವರು ನೀಡಿರುವ ಮನೆಯ ಹತ್ತಿರ ಹೋಗಿ ನಾನು ವಿಚಾರಣೆ ಮಾಡಿಲ್ಲ. ಆರೋಪಿಗೂ ಮುದ್ದೆ ಮಾಲಿಗೂ ಸಂಬಂಧವಿಲ್ಲದೇ ಇದ್ದರೂ ಸರಿಯಾಗಿ ತನಿಖೆ ಮಾಡದೇ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**